# ವಚನ ಸಾಹಿತ್ಯದಿಂದ ಕನ್ನಡ ಬೆಳವಣಿಗೆ

**ವಿಕ ಸುದ್ದಿಲೋಕ** ಕಲಬುರಗಿ

ವಿಶ್ವಗುರು ಬಸವಣ್ಣನವರ ಆದರ್ಶಗಳನ್ನು ಪ್ರತಿಯೊಬ್ಬರು ಪಾಲಿಸಬೇಕು ಎಂದು ಕರ್ನಾಟಕ ಕೇಂದ್ರೀಯ ವಿವಿಯ ಕುಲಪತಿ ಪ್ರೊ. ಎಚ್.ಎಂ. ಮಹೇಶ್ವರಯ್ಯ ಸಲಹೆ ನೀಡಿದರು.

ಗುಲ್ಬರ್ಗ ವಿಶ್ವವಿದ್ಯಾಲಯದ ಮಹಾತ್ಮ ಗಾಂಧಿ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ 'ಜಗಜ್ಯೋತಿ ಬಸವೇಶ್ವರ' ಜಯಂತ್ಯುತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

12 ನೇ ಶತಮಾನದಲ್ಲಿ ಶಿವಶರಣರು ರಚಿಸಿದ ವಚನ ಸಾಹಿತ್ಯದಿಂದಾಗಿ ಕನ್ನಡ ಭಾಷಾ ಬೆಳವಣಿಗೆಗೆ ಸಹಕಾರಿಯಾಯಿತು. ಅಂತಹ ಮಹಾನ್ ವಚನಗಳನ್ನು ಪ್ರತಿಯೊಬ್ಬರು ಅರ್ಥ ಮಾಡಿಕೊಳ್ಳಬೇಕು. ಹಾಗೂ ಅದರಂತೆ ನಡೆದುಕೊಳ್ಳಬೇಕು ಎಂದರು.

ಗುಲ್ಬರ್ಗ ವಿವಿ ಕುಲಪತಿ ಪ್ರೊ. ಎಸ್.ಆರ್. ನಿರಂಜನ್ ಮಾತನಾಡಿ, ಸಾವಿಗೂ ಅಂಜದೆ ನುಡಿದಂತೆ ನಡೆದ ಕೀರ್ತಿ ಬಸವಣ್ಣನವರಿಗೆ ಸಲ್ಲುತ್ತದೆ. ನಿರಂತರವಾಗಿ ಸಾಮಾಜಿಕ ಪಿಡುಗುಗಳ ವಿರುದ್ಧ ಹೋರಾಡಿದ ಅವರು ಅಸ್ಪೃಶ್ಯತೆ ಹೋಗಲಾಡಿಸುವುದಕ್ಕಾಗಿ ವಚನ ಚಳವಳಿ ನಡೆಸಿದರು ಎಂದರು ತಿಳಿಸಿದರು.

ಅಂದು ಸಾಮಾಜಿಕ ಪರಿವರ್ತನೆಗೆ ಕಾರಣವಾಗಿದ ವಚನಗಳು ಮತ್ತು ಬಸವಣ್ಣನವರ ಜೀವನದ ಕುರಿತು ಪ್ರತಿಯೊಬ್ಬರು ತಿಳಿದುಕೊಳ್ಳಬೇಕು. ಅದರಲ್ಲೂ ಮಕ್ಕಳಿಗೆ ಇದರ ಬಗ್ಗೆ ತಿಳಿಹೇಳುವ ಕೆಲಸ ಆಗಬೇಕು ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಬಿ.ಜಿ. ಪಾಟೀಲ್, ಗುವಿವಿ ಕುಲಸಚಿವ ಪ್ರೊ. ಮೈಖಲ್, ಮೌಲ್ಯಮಾಪನ ಕುಲಸಚಿವ ಪ್ರೊ. ಸಿ.ಎಸ್. ಪಾಟೀಲ್, ಬಸವೇಶ್ವರ ಜಯಂತ್ಯುತ್ಸವ ಸಮಿತಿ ಸಂಚಾಲಕ ಬಿ.ಎಂ. ರುದ್ರವಾಡಿ, ಗಳಂಗಳಪ್ಪ ಪಾಟೀಲ್ ಬಸವಾದಿ ಶರಣ ಸಾಹಿತ್ಯ ಕೇಂದ್ರದ ನಿರ್ದೇಶಕಿ ಡಾ. ಜಯಶ್ರೀ ದಂಡೆ, ಶೋಭಾ ಪಾಟೀಲ್ ಸೇರಿದಂತೆ ಇತರರಿದ್ದರು.



ಗುಲ್ಬರ್ಗ ವಿವಿಯಲ್ಲಿ ನಡೆದ ವಿಶ್ವಗುರು ಬಸವಣ್ಣನವರ ಜಯಂತ್ಯುತ್ಸವವನ್ನು ಸಿಯುಕೆ ಕುಲಪತಿ ಪ್ರೊ. ಎಚ್.ಎಂ. ಮಹೇಶ್ವರಯ್ಯ, ಪ್ರೊ. ಎಸ್.ಆರ್. ನಿರಂಜನ್ ಉದ್ಘಾಟಿಸಿದರು. ಎಂಎಲ್‌ಸಿ ಬಿ.ಜಿ. ಪಾಟೀಲ್, ಪ್ರೊ. ಮೈಖಲ್, ಪ್ರೊ. ಸಿ.ಎಸ್. ಪಾಟೀಲ್, ಬಿ.ಎಂ. ರುದ್ರವಾಡಿ, ಡಾ. ಜಯಶ್ರೀ ದಂಡೆ, ಶೋಭಾ ಪಾಟೀಲ್ ಇತರರಿದ್ದರು.

ವಿಜಯ ಕರ್ನಾಟಕ
ಮಂಗಳವಾರ,10 ಮೇ 2016



ಗುಲ್ಬರ್ಗ ವಿವಿಯಲ್ಲಿ ಬಸವ ಜಯಂತಿ ಕಾರ್ಯಕ್ರಮವನ್ನು ಕುಲಪತಿ ಪ್ರೊ. ಎಸ್.ಆರ್.ನಿರಂಜನ್ ಉದ್ಘಾಟಿಸಿದರು. ಶಾಸಕ ಬಿ.ಜಿ.ಪಾಟೀಲ್, ಪ್ರೊ.ಎಚ್.ಎಂ.ಮಹೇಶ್ವರಯ್ಯ, ಪ್ರೊ.ಮೈಕಲ್, ಪ್ರೊ.ಸಿ.ಎಸ್.ಪಾಟೀಲ್, ಡಾ.ಜಯಶ್ರೀ ಇದ್ದರು.

ನಂ. 1 ಕನ್ನಡ ದಿನಪತ್ರಿಕೆ
ವಿಜಯವಾಣಿ
VIJAYAVANI » KALABURAGI
10 | ಮಂಗಳವಾರ 10 ಮೇ 2016 10 MAY 2016

11/5/16

REGISTRAR
GULBARGA UNIVERSITY
GULBARGA